6. ವರದಿಗಳನ್ನೊಪ್ಪಿಸುವುದು

ಅಧ್ಯಕ್ಷರು:– ಮಾನ್ಯ ಉಪಾಧ್ಯಕ್ಷರ ಹೆಸರಿನಲ್ಲಿರುವ 2014–15ನೇ ಸಾಲಿನ ಅರ್ಜಿಗಳ ಸಮಿತಿಯ 18ನೇ ವರದಿಯನ್ನು ಮಂಡಿಸುತ್ತೇನೆ.

ಶ್ರೀ ನಾರಾಯಣಗೌಡ (ಕೆ.ಆರ್. ಪೇಟೆ) (ಶ್ರೀ ಬಿ.ಆರ್. ಯಾವಗಲ್, ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ, ಇವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಸರ್ಕಾರಿ ಭರವಸೆಗಳ ಸಮಿತಿಯ 14ನೇ ವರದಿಯನ್ನೊಪ್ಪಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಶ್ರೀ ಜಗದೀಶ ಶೆಟ್ಟರ್:– ಮಾನ್ಯ ಅಧ್ಯಕ್ಷರೆ, ಈಗ ಯಾವುದನ್ನು ತೆಗೆದುಕೊಳ್ಳುತ್ತೀರಿ?

ಅಧ್ಯಕ್ಷರು:– ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳ ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ 2014 ಅನ್ನು ಸರ್ಕಾರದವರು ವಾಪಸ್ಸು ತೆಗೆದುಕೊಳ್ಳುತ್ತಿದ್ದಾರೆ.

ಶ್ರೀ ಜಗದೀಶ ಶೆಟ್ಟರ್:– ಆಯಿತು, ವಾಪಸ್ಸು ತೆಗೆದುಕೊಳ್ಳಲಿ.

ಶ್ರೀ ಕೆ.ಎಂ. ಶಿವಲಿಂಗೇಗೌಡ:– ಮಾನ್ಯ ಸಚಿವರೆ ಈ ಬಿಲ್ ಅನ್ನು ಏತಕ್ಕೋಸ್ಕರ ಹಿಂಪಡೆಯುತ್ತಿದ್ದೀರೆಂದು ತಾವು ಹೇಳಬೇಕು.

ಅಧ್ಯಕ್ಷರು:– ನೋಡೋಣ ತಾಳಿ.

ಒಬ್ಬ ಮಾನ್ಯ ಸದಸ್ಯರು:– ಏತಕ್ಕಾಗಿ ವಾಪಸ್ಸು ಪಡೆಯುತ್ತಿದ್ದಾರೆ?

ಶ್ರೀ ಕೆ.ಎಂ. ಶಿವಲಿಂಗೇಗೌಡ:– ಬಿಜೆಪಿಯವರಿಗೆ ಹೆದರಿಕೊಂಡು ಈ ಬಿಲ್ ಅನ್ನು ವಾಪಸ್ಸು ತೆಗೆದುಕೊಂಡಿದ್ದೀರಾ?